**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.04.2026 19.35 hrs**

**<><><*><><>**

ಮುಖ್ಯಾಂಶಗಳು

**೧. ಬೆಂಗಳೂರು- ಮುಂಬೈ ನಡುವೆ ಶೀಘ್ರ ಸೂಪರ್ ಫಾಸ್ಟ್, ವಂದೇ ಭಾರತ್ ಸ್ಲೀಪರ್ ರೈಲು ಕಾರ್ಯಾರಂಭ- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್**

**೨. ಪಶ್ಚಿಮ ಬಂಗಾಳ ವಿಧಾನಸಭೆಯ ಅಂತಿಮ ಹಂತದ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸುಗೊಂಡ ಪ್ರಚಾರ**

**೩. ಮನ್ ಕಿ ಬಾತ್; ನಾಳೆ ಬೆಳಗ್ಗೆ ೧೧ ಗಂಟೆಗೆ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**೪. ಛತ್ತೀಸ್‌ಗಢದ ೪೭ ಮಾವೋವಾದಿಗಳು ಪೊಲೀಸರ ಮುಂದೆ ಶರಣು**

**೫. ಐಪಿಎಲ್ ಟಿ-೨೦ ಕ್ರಿಕೆಟ್; ರಾಜಸ್ಥಾನ ರಾಯಲ್ಸ್ ವಿರುದ್ಧ ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ಫೀಲ್ಡಿಂಗ್ ಆಯ್ಕೆ**

**<><><*><><>**

ಬೆಂಗಳೂರಿನ ಭಾರತ ಅರ್ಥ್ ಮೂವರ್ಸ್ ಲಿಮಿಟೆಡ್-ಬೆಮೆಲ್ ಘಟಕಕ್ಕೆ ಕೇಂದ್ರ ರೈಲ್ವೆ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಇಲಾಖೆ ಸಚಿವ ಅಶ್ವಿನಿ ವೈಷ್ಣವ್ ಇಂದು ಭೇಟಿ ನೀಡಿ, ಉತ್ಪಾದನೆಗೊಳ್ಳುತ್ತಿರುವ ಮೆಟ್ರೋ ಬೋಗಿಗಳನ್ನು ಪರಿಶೀಲಿಸಿದರು. ಬೆಂಗಳೂರು-ಮಂಗಳೂರು-ಮಡ್‌ಗಾಂವ್ ವಂದೇ ಭಾರತ್ ರೈಲು ಸೇವೆ ಶೀಘ್ರವೇ ಆರಂಭವಾಗಲಿದೆ ಎಂದು ಸಚಿವರು ಘೋಷಿಸಿದ್ದಾರೆ. ಬೆಂಗಳೂರು ಮತ್ತು ಮುಂಬೈ ನಡುವೆ ಸೂಪರ್ ಫಾಸ್ಟ್ ಮತ್ತು ವಂದೇ ಭಾರತ್ ಸ್ಲೀಪರ್ ರೈಲು ಕೂಡ ಶೀಘ್ರದಲ್ಲೇ ಕಾರ್ಯ ನಿರ್ವಹಿಸಲಿವೆ ಎಂದು ತಿಳಿಸಿದ್ದಾರೆ.

**ಧ್ವನಿ: ಅಶ್ವಿನಿ ವೈಷ್ಣವ್**

ಇದೇ ವೇಳೆ ಬೆಂಗಳೂರಿನಲ್ಲಿ ಉಪನಗರ ರೈಲು ಯೋಜನೆಯ ಪ್ರಗತಿಯ ಬಗ್ಗೆಯೂ ಅವರು ಸಂತಸ ವ್ಯಕ್ತಪಡಿಸಿದ್ದಾರೆ.

**<><><*><><>**

ಅರ್ಥಶಾಸ್ತ್ರಜ್ಞ ಅಶೋಕ್ ಕುಮಾರ್ ಲಾಹಿರಿ ಅವರು, ನೀತಿ ಆಯೋಗದ ಉಪಾಧ್ಯಕ್ಷರಾಗಿ ನೇಮಕಗೊಂಡಿದ್ದಾರೆ. ಅವರು ಪ್ರಸ್ತುತ ಉಪಾಧ್ಯಕ್ಷರಾದ ಸುಮನ್.ಕೆ ಬೆರಿ ಅವರ ಸ್ಥಾನವನ್ನು ಅಲಂಕರಿಸಲಿದ್ದಾರೆ. ಇದೇ ವೇಳೆ, ಸರ್ಕಾರ, ರಾಜೀವ್ ಗೌಬಾ, ಕೆ.ವಿ.ರಾಜು, ಗೋವರ್ಧನ್ ದಾಸ್, ಎಂ.ಶ್ರೀನಿವಾಸ್, ಅಭಯ್ ಕರಂದಿಕರ್ ಅವರನ್ನು ನೀತಿ ಆಯೋಗದ ಪೂರ್ಣಕಾಲಿಕ ಸದಸ್ಯರನ್ನಾಗಿ ನೇಮಿಸಿದೆ. ಅಶೋಕ್ ಕುಮಾರ್ ಲಾಹಿರಿ ಅವರು, ಈ ಹಿಂದೆ ಭಾರತದ ೧೨ನೇ ಮುಖ್ಯ ಆರ್ಥಿಕ ಸಲಹೆಗಾರರಾಗಿ ಸೇವೆ ಸಲ್ಲಿಸಿದ್ದಾರೆ. ಅಲ್ಲದೆ, ೧೫ನೇ ಹಣಕಾಸು ಆಯೋಗದ ಸದಸ್ಯರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ವಿಶ್ವಬ್ಯಾಂಕ್ ಮತ್ತು ಅಂತಾರಾಷ್ಟ್ರೀಯ ಹಣಕಾಸು ನಿಧಿಯಂತಹ ಅಂತಾರಾಷ್ಟ್ರೀಯ ಸಂಸ್ಥೆಗಳಲ್ಲಿ ಉನ್ನತಮಟ್ಟದ ಹುದ್ದೆಗಳನ್ನು ಅಲಂಕರಿಸಿದ್ದರು. ನೀತಿ ಆಯೋಗದ ನೂತನ ಉಪಾಧ್ಯಕ್ಷರು ಮತ್ತು ಪೂರ್ಣಕಾಲಿಕ ಸದಸ್ಯರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

**<><><*><><>**

ಕ್ಯಾನ್ಸರ್ ವಿರುದ್ಧದ ಹೋರಾಟದಲ್ಲಿ ಮತ್ತು ರೋಗದ ಮೇಲೆ ವಿಜಯ ಸಾಧಿಸಲು ಮಾನಸಿಕ ಶಕ್ತಿ ಬಹಳ ಮುಖ್ಯ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಜೈಪುರದಲ್ಲಿಂದು ನಡೆದ ರಾಜಸ್ಥಾನ ವಿಶ್ವವಿದ್ಯಾಲಯದ ೩೫ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಕ್ಯಾನ್ಸರ್ ತಡೆಗಟ್ಟಲು ವಿಶೇಷವಾಗಿ ಯುವಜನತೆ ಮಾದಕದ್ರವ್ಯ ಮತ್ತು ತಂಬಾಕಿನಿಂದ ದೂರವಿರಬೇಕು. ಕ್ಯಾನ್ಸರ್ ತಡೆಗಟ್ಟುವಿಕೆಯ ಬಗ್ಗೆ ಜನರಿಗೆ ಅರಿವು ಮೂಡಿಸಲು ಬೃಹತ್ ಮಟ್ಟದ ಸಾರ್ವಜನಿಕ ಜಾಗೃತಿ ಅಭಿಯಾನಗಳನ್ನು ನಡೆಸಬೇಕು ಎಂದು ಅವರು ಸಲಹೆ ನೀಡಿದರು. ಪ್ರತಿವರ್ಷ ಕ್ಯಾನ್ಸರ್ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಸಮಗ್ರ ಕ್ಯಾನ್ಸರ್ ಚಿಕಿತ್ಸೆಯು ಈಗ ಲಭ್ಯವಿದೆ ಎಂದು ಹೇಳಿದರು.

**<><><*><><>**

ನ್ಯಾಯಾಂಗ ಮತ್ತು ಅದರ ಸಂಯೋಜಿತ ಸಂಸ್ಥೆಗಳು ಸಾರ್ವಜನಿಕರಲ್ಲಿ ಆಳವಾದ ವಿಶ್ವಾಸವನ್ನು ಹೊಂದಿವೆ. ಈ ನಂಬಿಕೆಯನ್ನು ಉಳಿಸಿಕೊಳ್ಳುವುದು ಹಾಗೂ ಮತ್ತಷ್ಟು ಬಲಪಡಿಸುವುದು ಎಲ್ಲಾ ಪಾಲುದಾರರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅಭಿಪ್ರಾಯಪಟ್ಟಿದ್ದಾರೆ. ಜೈಪುರದ ಕಾನ್ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ನಡೆದ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ನಿವೃತ್ತ ನ್ಯಾಯಾಧೀಶರು ನಾಗರಿಕರಲ್ಲಿ ಕಾನೂನು ಜಾಗೃತಿ ಮೂಡಿಸುವುದರ ಜೊತೆಗೆ ಸಂಧಾನ ಮತ್ತು ಮಧ್ಯಸ್ಥಿಕೆಯಲ್ಲಿ ಮಹತ್ವದ ಪಾತ್ರ ವಹಿಸಬಹುದು ಎಂದರು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಗಳು ಸೇರಿದಂತೆ, ನ್ಯಾಯಾಂಗ ಮತ್ತು ಅದರ ಸಂಬಂಧಿತ ಸಂಸ್ಥೆಗಳು ಹೆಚ್ಚಿನ ಜಾಗೃತಿಯೊಂದಿಗೆ ಸಕ್ರಿಯವಾಗಿ ಕಾರ್ಯ ನಿರ್ವಹಿಸುವಂತೆ ಅವರು ಇದೇ ವೇಳೆ ಕರೆ ನೀಡಿದರು.

**<><><*><><>**

ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರು ಇಂದು ಅಮೆರಿಕ ಪೆಸಿಫಿಕ್ ಏರ್‌ಫೋರ್ಸ್ ಕಮಾಂಡರ್ ಜನರಲ್ ಕೆವಿನ್ ಬಿ ಶ್ನೈಡರ್ ಅವರೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ, ಪ್ರಾದೇಶಿಕ ಭದ್ರತೆ ಹಾಗೂ ಇಂಡೋಪೆಸಿಫಿಕ್ ಮತ್ತು ಅದರಾಚೆಗಿನ ಪ್ರದೇಶಗಳಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಕಾಯ್ದುಕೊಳ್ಳಲು ಉಭಯ ದೇಶಗಳ ನಡುವೆ ಹಂಚಿಕೆಯ ಬದ್ಧತೆಯನ್ನು ಪುನರುಚ್ಚರಿಸಲಾಯಿತು. ಆಧುನಿಕ ಯುಗದಲ್ಲಿ ತಂತ್ರಜ್ಞಾನವು ಪ್ರಮುಖ ಅಂಶವಾಗಿದೆ. ಭಾರತ ಮತ್ತು ಅಮೆರಿಕ ನಡುವಿನ ಪಾಲುದಾರಿಕೆಯು, ಸಮನ್ವಯ, ಸಾಮರ್ಥ್ಯ ಮತ್ತು ವ್ಯೂಹಾತ್ಮಕ ದೂರದೃಷ್ಟಿಯೊಂದಿಗೆ ವಿಕಸನಗೊಳ್ಳುತ್ತಾ ಸಾಗಿದೆ.

**<>><><*><><<>**

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಹಂತದ ಮತದಾನಕ್ಕೆ ದಿನಗಣನೆ ಆರಂಭವಾಗಿದ್ದು, ಪ್ರಚಾರ ಕಾರ್ಯ ಅಂತಿಮ ಘಟ್ಟ ತಲುಪಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ರಾಜ್ಯಾದ್ಯಂತ ಸರಣಿ ರ್‍ಯಾಲಿ ಮತ್ತು ರೋಡ್ ಶೋಗಳನ್ನು ನಡೆಸುವ ಮೂಲಕ ಮತದಾರರನ್ನು ಸೆಳೆಯಲು ಕಸರತ್ತು ನಡೆಸುತ್ತಿದ್ದಾರೆ. ಎರಡನೇ ಹಂತದ ಮತದಾನ ಇದೇ ೨೯ ರಂದು ನಡೆಯಲಿದೆ. ಬಿಜೆಪಿಯ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪೂರ್ವ ಬರ್ಧಮಾನ್ ಜಿಲ್ಲೆ ಜಮಾಲ್‌ಪುರದ ಸೆಲಿಮಾಬಾದ್ ತರುಣ್ ಸಂಘ ಮೈದಾನದಲ್ಲಿ ಹಾಗೂ ಹೌರಾದ ಶ್ಯಾಂಪುರದಲ್ಲಿ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಿದರು. ಇದೇ ವೇಳೆ ಸಚಿವ ಅಮಿತ್ ಶಾ, ಹೌರಾದಲ್ಲಿ ಬೃಹತ್ ರೋಡ್ ಶೋ ನಡೆಸಿದರು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಇಂದು ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಿದರು. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಅವರು ಪೂರ್ವ ಬರ್ಧಮಾನ್‌ನ ಬಜೆಪರ್ತಪುರದಲ್ಲಿ 'ವಿಜಯ್ ಸಂಕಲ್ಪ ಯಾತ್ರೆ' ನಡೆಸಿದರು. ಮತ್ತೊಂದೆಡೆ, ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಇಂದು ಹೂಗ್ಲಿಯ ಶ್ರೀರಾಮಪುರ, ಕೋಲ್ಕತ್ತಾದ ಶಾಹಿದ್ ಮಿನಾರ್ ಮತ್ತು ಮೇಟಿಯಾಬ್ರೂಜ್‌ನಲ್ಲಿ ಬಹಿರಂಗ ಸಭೆಗಳನ್ನು ನಡೆಸಿದರು.

**<>><><*><><<>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ

ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<>><><*><><<>**

ತೆಲಂಗಾಣ ಪೊಲೀಸರ ಸಮ್ಮುಖದಲ್ಲಿ, ಛತ್ತೀಸ್‌ಗಢದ ಮಹಿಳೆಯರು ಸೇರಿದಂತೆ ಸುಮಾರು ೪೭ ಮಾವೋವಾದಿಗಳು ಹೈದರಾಬಾದ್‌ನಲ್ಲಿ ಇಂದು ಶರಣಾದರು. ಛತ್ತೀಸ್‌ಗಢದ ದಕ್ಷಿಣ ಬಸ್ತಾರ್ ವಿಭಾಗಕ್ಕೆ ಸೇರಿದ ಈ ಮಾವೋವಾದಿಗಳು ಡಿಜಿಪಿ ಶಿವಧರ್ ರೆಡ್ಡಿ ಅವರ ಎದುರು ಶರಣಾದರು. ಈ ಸಂದರ್ಭದಲ್ಲಿ ಮಾತನಾಡಿದ ಡಿಜಿಪಿ ಶಿವಧರ್ ರೆಡ್ಡಿ, ಶರಣಾದ ಮಾವೋವಾದಿಗಳು ತಮ್ಮ ಬಳಿಯಿದ್ದ ೩೨ ಶಸ್ತ್ರಾಸ್ತ್ರಗಳನ್ನು ಪೊಲೀಸರಿಗೆ ಹಸ್ತಾಂತರಿಸಿದ್ದಾರೆ. ಶರಣಾದವರಿಗೆ ೧ ಕೋಟಿ ೨೦ ಲಕ್ಷ ರೂಪಾಯಿಗಳ ಪುನರ್ವಸತಿ ಪ್ಯಾಕೇಜ್ ಜೊತೆಗೆ ಕೇಂದ್ರ ಸರ್ಕಾರದ ಪ್ರೋತ್ಸಾಹ ಧನ ಮತ್ತು ಉಚಿತ ಆರೋಗ್ಯ ಕಾರ್ಡ್‌ಗಳನ್ನು ನೀಡಲಾಗುವುದು ಎಂದು ತಿಳಿಸಿದ್ದಾರೆ.

**<>><><*><><<>**

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ಆಯೋಜನೆಗೊಂಡಿದ್ದು, ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಮೊದಲ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿದೆ. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೨೬೪ ರನ್ ಗಳಿಸಿತು. ಕೆ.ಎಲ್.ರಾಹುಲ್ ೬೭ ಎಸೆತಗಳಲ್ಲಿ ೧೫೨ ರನ್‌ಗಳನ್ನು ಸಿಡಿಸಿದರೆ, ನಿತೀಶ್ ರಾಣಾ ೪೪ ಎಸೆತಗಳಲ್ಲಿ ೯೧ ರನ್ ಗಳಿಸಿದರು. ಈ ಬೃಹತ್ ಮೊತ್ತ ಬೆನ್ನತ್ತಿರುವ ಪಂಜಾಬ್ ಕಿಂಗ್ಸ್ ಇತ್ತೀಚಿನ ವರದಿಯಂತೆ ೧೭ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೪೨ ರನ್ ಮಾಡಿ ಆಡುತ್ತಿದೆ. ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಎರಡನೇ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಸೆಣಸಾಟ ನಡೆಸುತ್ತಿವೆ. ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**